2. ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ 2010–11ನೇ ಸಾಲಿನ ವಾರ್ಷಿಕ ವರದಿ.
3. ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

ಅಧ್ಯಕ್ಷರು : ಮಂಡಿಸಲಾಯಿತು.

VII. ಶ್ರೀ ಎಸ್.ಎ.ರವೀಂದ್ರನಾಥ್ (ತೋಟಗಾರಿಕೆ ಮತ್ತು ಸಕ್ಕರೆ ಸಚಿವರು) ಅವರು:

2009 ಅಧಿನಿಯಮದ 57ರ ಪ್ರಕಾರ

1. ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟೆ ಇದರ 2010–11ನೇ ಸಾಲಿನ ವಾರ್ಷಿಕ ವರದಿ.

ಅಧ್ಯಕ್ಷರು : ಮಂಡಿಸಲಾಯಿತು.

9. ವಿತ್ತೀಯ ಕಾರ್ಯಕಲಾಪ :

ಶ್ರೀ ಎಸ್. ಸುರೇಶ್ ಕುಮಾರ್ : (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ) : ಮಾನ್ಯ ಸಭಾಧ್ಯಕ್ಷರೆ, ಭಾರತದ ಸಂವಿಧಾನದ ಅನುಚ್ಛೇದ 205(1)(ಬಿ)ರಂತೆ ಅನುದಾನಕ್ಕಿಂತ ಹೆಚ್ಚುವರಿ ವೆಚ್ಚವಾಗಿರುವ ಮೊತ್ತವನ್ನು ಸಕ್ರಮಗೊಳಿಸುವುದಕ್ಕೆ ಸಂಬಂಧಿಸಿದಂತೆ ಬೇಡಿಕೆಗಳನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

10. ಪ್ರಕಟಣೆ :

ಅಧ್ಯಕ್ಷರು : ವಿಧಾನ ಪರಿಷತ್ತಿನಿಂದ ಮಾನ್ಯ ಸಭಾಪತಿಯವರಿಂದ ಬಂದಿರುವ ಸಂದೇಶದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 118ರ ಮೇರೆಗೆ ವಿಧಾನ ಪರಿಷತ್ತು 2011ನೇ ಸಾಲಿನ ಮೈಸೂರು ಧಾರ್ಮಿಕ ಧರ್ಮದಾಯ ಇನಾಂಗಳ ರದ್ದತಿ ಕರ್ನಾಟಕ ತಿದ್ದುಪಡಿ ವಿಧೇಯಕವನ್ನು ದಿನಾಂಕ: 14.12.2011 ರಂದು ಅಂಗೀಕರಿಸಲಾಗಿದೆ ಎಂದು ತಿಳಿಸಿರುತ್ತಾರೆ.